**ಕರ್ನಾಟಕ ವಿಧಾನಸಭೆ**
**ಹದಿನೈದನೇ ವಿಧಾನಸಭೆ**
**ಹನ್ನೆರಡನೇ ಅಧಿವೇಶನ**

# ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2022

**(2022ರ ವಿಧಾನಸಭೆಯ ವಿಧೇಯಕ ಸಂಖ್ಯೆ–13)**

ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ ಅಧಿನಿಯಮ, 1957ನ್ನು ಮತ್ತಷ್ಟು ತಿದ್ದುಪಡಿ ಮಾಡುವ ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ ಅಧಿನಿಯಮ, 1957 (1957ರ ಕರ್ನಾಟಕ ಅಧಿನಿಯಮ 35)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ಅಧಿನಿಯಮ, 2022 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. 4ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ ಅಧಿನಿಯಮ, 1957 (1957ರ ಕರ್ನಾಟಕ ಅಧಿನಿಯಮ 35)ರ 4ನೇ ಪ್ರಕರಣದಲ್ಲಿನ (1)ನೇ ಉಪಪ್ರಕರಣದಲ್ಲಿ,-

(i) "ಹದಿನೈದು ದಿವಸಗಳೊಳಗಾಗಿ" ಎಂಬ ಪದಗಳಿಗೆ ಬದಲಾಗಿ "ಒಂದು ತಿಂಗಳೊಳಗಾಗಿ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ii) (1)ನೇ ಉಪ ಪ್ರಕರಣದ ತರುವಾಯ ಮೊದಲ ಪರಂತುಕಕ್ಕೆ ಮೊದಲು ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು ಮೂವತ್ತು ಸಾವಿರ ರೂಪಾಯಿಗಳು ಮತ್ತು ಹೆಚ್ಚಿನ ಮೊತ್ತವನ್ನು ತ್ರೈಮಾಸಿಕವಾಗಿ ಪಾವತಿಸಬೇಕಾದ ವಾಹನಕ್ಕೆ ಸಂಬಂಧಿಸಿದಂತೆ ತೆರಿಗೆಯನ್ನು, ತೆರಿಗೆಯ ಸಿಂಧುತ್ವವು ಮುಕ್ತಾಯವಾಗುವ ಮೊದಲು ದಾಮಾಷಾ (prorata) ಆಧಾರದ ಮೇಲೆ ಮತ್ತು ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂಥ ಷರತ್ತಿಗೊಳಪಟ್ಟು ಮಾಸಿಕವಾಗಿ ಪಾವತಿಸತಕ್ಕದ್ದು."

(iii) ಹಾಗೆ ಸೇರಿಸಿದ ತರುವಾಯ, ಪ್ರಸ್ತುತವಿರುವ ಮೊದಲ ಪರಂತುಕದಲ್ಲಿನ "ಪರಂತು" ಎಂಬ ಪದದ ಬದಲಾಗಿ "ಮತ್ತು ಪರಂತು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ತೆರಿಗೆ ಪಾವತಿಯ ಅವಧಿಯನ್ನು ಹದಿನೈದು ದಿನಗಳಿಂದ ಒಂದು ತಿಂಗಳಿಗೆ ವಿಸ್ತರಿಸುವುದಕ್ಕಾಗಿ ಮತ್ತು ಮೂವತ್ತು ಸಾವಿರ ರೂಪಾಯಿಗಳ ತ್ರೈಮಾಸಿಕವಾಗಿ ಪಾವತಿಸಬೇಕಾದ ವಾಹನಕ್ಕೆ ಸಂಬಂಧಿಸಿದಂತೆ ತೆರಿಗೆಯನ್ನು, ತೆರಿಗೆಯ ಸಿಂಧುತ್ವವು ಮುಕ್ತಾಯವಾಗುವ ಮೊದಲು ದಾಮಾಷಾ (pro rata) ಆಧಾರದ ಮೇಲೆ ಮಾಸಿಕವಾಗಿ ಪಾವತಿಸುವುದಕ್ಕೆ ಉಪಬಂಧ ಕಲ್ಪಿಸಲು ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ ಅಧಿನಿಯಮ, 1957 (1957ರ ಕರ್ನಾಟಕ ಅಧಿನಿಯಮ 35)ಕ್ಕೆ ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ, ಈ ವಿಧೇಯಕ.

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಬಿ. ಶ್ರೀರಾಮುಲು**
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ ಅಧಿನಿಯಮ, 1957ರ (1957ರ ಕರ್ನಾಟಕ ಅಧಿನಿಯಮ 35) ಉದ್ಧೃತ ಭಾಗ

**xx xx xx**

**4. ತೆರಿಗೆ ಸಂದಾಯ.- (1)** 3ನೇ ಪ್ರಕರಣದ ಮೇರೆಗೆ ವಿಧಿಸಿದ ತೆರಿಗೆಯನ್ನು, ಮೋಟಾರು ವಾಹನದ ನೋಂದಾಯಿತ ಒಡೆಯನು ಅಥವಾ ಅದರ ಸ್ವಾಧೀನತೆಯನ್ನು ಅಥವಾ ನಿಯಂತ್ರಣವನ್ನು ಹೊಂದಿರುವ ವ್ಯಕ್ತಿಯು, ತನ್ನ ಆಯ್ಕೆಗನುಸಾರವಾಗಿ ತ್ರೈಮಾಸಿಕಕ್ಕೆ, ಅರ್ಧ ವರ್ಷಕ್ಕೆ ಅಥವಾ ವರ್ಷಕ್ಕೆ, ಸಂದರ್ಭಾನುಸಾರ ಅಂಥ ತ್ರೈಮಾಸಿಕದ, ಅರ್ಧ ವರ್ಷದ ಅಥವಾ ವರ್ಷದ ಪ್ರಾರಂಭದಿಂದ ಹದಿನೈದು ದಿವಸಗಳೊಳಗೆ ಮುಂಗಡವಾಗಿ ಸಂದಾಯ ಮಾಡತಕ್ಕದ್ದು:

**xx xx xx**

ಪರಂತು, ಅನುಸೂಚಿಯ ಎ ಭಾಗದ 1ರಲ್ಲಿ ಮತ್ತು 14(2)ನೇ ಬಾಬಿನಲ್ಲಿ ನಿರ್ದಿಷ್ಟಪಡಿಸಿದ ವಾಹನಗಳಿಗೆ ಸಂಬಂಧಿಸಿದಂತೆ, ತೆರಿಗೆಯನ್ನು ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂಥ ಷರತ್ತುಗಳಿಗೆ ಒಳಪಟ್ಟು ವಾರ್ಷಿಕವಾಗಿ ಸಂದಾಯ ಮಾಡತಕ್ಕದ್ದು.

ಪರಂತು xxx

ಮತ್ತೂ ಪರಂತು, ಈ ಉಪ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಅಂಥ ತೆರಿಗೆಯನ್ನು, ಐದು ವರ್ಷಗಳು ಅಥವಾ ಹತ್ತು ವರ್ಷಗಳ ಅವಧಿಗೆ ಆ ಐದು ವರ್ಷಗಳ ಅಥವಾ ಹತ್ತು ವರ್ಷಗಳ ಅವಧಿಯ ಮೊದಲ ವರ್ಷದ ಅವಧಿಯ ಪ್ರಾರಂಭದಿಂದ ಹದಿನೈದು ದಿನಗಳ ಒಳಗಾಗಿ ಅಂಥ ಮಾಲೀಕನು ಅಥವಾ ತಾನು ಆಯ್ಕೆ ಮಾಡಿಕೊಂಡ ವ್ಯಕ್ತಿಯು ಒಂದೇ ಮೊತ್ತದಲ್ಲಿ ಮುಂಗಡವಾಗಿ ಸಂದಾಯ ಮಾಡಬಹುದು.

**xx xx xx**

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಪಿ7, ಕಾಸೂ , ಪ್ರತಿಗಳು 500, 25ನೇ ಮಾರ್ಚ್ 2022